**Bangalore**
**Regional News**
**16.08.2025 :6.40pm**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು :

೧. ರಾಜ್ಯದಲ್ಲಿ ಪರಿಶಿಷ್ಟರ ಕಲ್ಯಾಣಕ್ಕೆ ೩೮ ಸಾವಿರದ ೭೧೭ಕೋಟಿ ವೆಚ್ಚ - ಶೇ ೯೭ರಷ್ಟು ಪ್ರಗತಿ - ಮುಖ್ಯಮಂತ್ರಿ ಸಿದ್ಧರಾಮಯ್ಯ ಸ್ಪಷ್ಟನೆ

೨. ಬೆಳಗಾವಿಯಿಂದ ಮುಂಬೈಗೆ ಹೊರಟಿದ್ದ ವಿಮಾನ ತುರ್ತು ಭೂಸ್ಪರ್ಶ - ಪೈಲಟ್ ಸಮಯಪ್ರಜ್ಞೆಯಿಂದ ತಪ್ಪಿದ ಅನಾಹುತ

೩. ಕೋಲಾರದ ಕುರುಗಲ್ ಪಟ್ಟಣ ಪಂಚಾಯಿತಿಯ ೧೭ ಸ್ಥಾನಗಳಿಗೆ ನಾಳೆ ಚುನಾವಣೆ - ಮತಗಟ್ಟೆಯಲ್ಲಿ ಬಿಗಿ ಭದ್ರತೆ

೪. ಬೆಂಗಳೂರಿನಲ್ಲಿ ಅಗ್ನಿ ಅವಘಡ - ಒಂದೇ ಕುಟುಂಬದ ನಾಲ್ವರು ಸೇರಿ ಐವರು ಸಜೀವ ದಹನ

೫. ರಾಜ್ಯದ ಕರಾವಳಿ, ಮಲೆನಾಡು ಭಾರೀ ಮಳೆ ಸಂಭವ - ಘಟ್ಟ ಪ್ರದೇಶಗಳಲ್ಲಿ ಭೂ ಕುಸಿತ ಸಾಧ್ಯತೆ

><><><><><

ಪರಿಶಿಷ್ಟರ ಕಲ್ಯಾಣಕ್ಕೆ ಕಳೆದ ವರ್ಷ ೩೮ ಸಾವಿರದ ೭೯೩ ಕೋಟಿ ರೂಪಾಯಿ ಬಿಡುಗಡೆಯಾಗಿದ್ದು, ೩೮ ಸಾವಿರದ ೭೧೭ಕೋಟಿ ರೂಪಾಯಿ ವೆಚ್ಚ ಮಾಡಿ ಶೇಕಡಾ ೯೭ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಸಭೆಯಲ್ಲಿ ಮಾತನಾಡಿದ ಅವರು, ದೇವದಾಸಿ ಪುನರ್‌ವಸತಿ ಕಾರ್ಯವನ್ನು ಪರಿಣಾಮಕಾರಿಯಾಗಿ ಕೈಗೊಳ್ಳುವ ಉದ್ದೇಶದಿಂದ ಸೆಪ್ಟಂಬರ್ ಮೊದಲ ವಾರದಿಂದ ಪುನರ್ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ದೇವದಾಸಿ ಪದ್ಧತಿಯನ್ನು ಈಗಾಗಲೇ ನಿರ್ಬಂಧಿಸಲಾಗಿದ್ದು, ಯಾವುದೇ ಕಾರಣಕ್ಕೂ ದೇವದಾಸಿ ಪದ್ಧತಿ ಮುಂದುವರೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

><><><><><

ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಿಂದ ಮುಂಬೈಗೆ ಹೊರಟಿದ್ದ ಸ್ಟಾರ್ ಏರ್ ವಿಮಾನದಲ್ಲಿ ತಾಂತ್ರಿಕ ದೋಷ ಕಂಡುಬಂದ ಹಿನ್ನೆಲೆಯಲ್ಲಿ ಮತ್ತೆ ಬೆಳಗಾವಿ ವಿಮಾನ ನಿಲ್ದಾಣದಲ್ಲಿಯೇ ಲ್ಯಾಂಡ್ ಆಗಿದೆ. ಬೆಳಗಾವಿ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆಗಿದ್ದ ವಿಮಾನದಲ್ಲಿ ತಾಂತ್ರಿಕ ದೋಷ ಕಂಡುಬಂದಿತ್ತು, ಅದನ್ನು ಗುರುತಿಸಿದ ಪೈಲಟ್ ೧೫ ನಿಮಿಷ ಹಾರಾಟ ನಡೆಸಿ ಪುನಃ ಬೆಳಗಾವಿ ವಿಮಾನ ನಿಲ್ದಾಣದಲ್ಲಿಯೇ ಭೂಸ್ಪರ್ಶ ಮಾಡಿಸಿದ್ದಾರೆ. ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ. ಪ್ರಯಾಣಿಕರು, ವಿಮಾನ ಸಿಬ್ಬಂದಿ ಸುರಕ್ಷಿತರಾಗಿದ್ದಾರೆ ಎಂದು ತಿಳಿದುಬಂದಿದೆ. ವಿಮಾನದಲ್ಲಿ ೪೮ ಪ್ರಯಾಣಿಕರು ಪ್ರಯಾಣಿಸುತ್ತಿದ್ದರು. ಬೆಳಿಗ್ಗೆ ೭.೫೦ಕ್ಕೆ ಟೇಕಾಫ್ ಆಗಿದ್ದ ವಿಮಾನ ೮.೫೦ಕ್ಕೆ ಮುಂಬೈನಲ್ಲಿ ಇಳಿಯಬೇಕಿತ್ತು. ಆದರೆ, ತಾಂತ್ರಿಕ ದೋಷದ ಹಿನ್ನೆಲೆಯಲ್ಲಿ ಮುಂಬೈಗೆ ಹೋಗದೆ ಬೆಳಗಾವಿಯಲ್ಲೇ ಇಳಿದಿದೆ. ಎಲ್ಲ ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ’ ಎಂದು ಸಾಂಬ್ರಾ ವಿಮಾನ ನಿಲ್ದಾಣ ನಿರ್ದೇಶಕ ಎಸ್.ತ್ಯಾಗರಾಜನ್ ತಿಳಿಸಿದ್ದಾರೆ.

><><><><><

ಕೋಲಾರ ಜಿಲ್ಲೆಯ ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಯ ೧೭ ಸ್ಥಾನಗಳಿಗೆ ನಾಳೆ ಬೆಳಿಗ್ಗೆ ೭ ಗಂಟೆಯಿಂದ ಸಂಜೆ ೫ ಗಂಟೆಯವರೆಗೆ ಚುನಾವಣೆ ನಡೆಯಲಿದೆ. ಚುನಾವಣಾ ಕಣದಲ್ಲಿ ೫೧ ಜನ ಅಭ್ಯರ್ಥಿಗಳಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಇಂದು ಚುನಾವಣಾ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿದ ಅವರು, ೧೭ ವಾರ್ಡ್ ಗಳಿಗೆ ಇಬ್ಬರು ಚುನಾವಣಾಧಿಕಾರಿಗಳು ಮತ್ತು ಇಬ್ಬರು ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಲಾಗಿದೆ. ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಯ ವ್ಯಾಪ್ತಿ ಯಲ್ಲಿ ೨೨ ಮತಗಟ್ಟೆಗಳನ್ನು ಸ್ಥಾಪಿಸಿದ್ದು, ಒಟ್ಟು ೧೩ ಸಾವಿರದ ೪೯೯ ಜನ ಮತದಾರರಿದ್ದಾರೆ. ಆಗಸ್ಟ್ ೨೦ ರಂದು ತಾಲೂಕು ಕೇಂದ್ರದಲ್ಲಿ ಮತ ಎಣಿಕೆ ನಡೆಯಲಿದೆ. ಮತ ಗಟ್ಟೆಗಳ ಸುತ್ತ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು, ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ.

><><><><><

"ಬಿಬಿಎಂಪಿ ಆರೋಗ್ಯ ಸಂಪರ್ಕ ಕಾರ್ಯಕರ್ತೆಯರ ವೇತನ ಗೊಂದಲವನ್ನು ಅಧಿಕಾರಿಗಳ ಜತೆ ಚರ್ಚಿಸಿ ಶೀಘ್ರವೇ ಬಗೆಹರಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಬಿಬಿಎಂಪಿ ಆರೋಗ್ಯ ಸಂಪರ್ಕ ಕಾರ್ಯಕರ್ತೆಯರ ಅಹವಾಲು ಸ್ವೀಕರಿಸಿ ಮಾತನಾಡಿದರು. ಮನವಿಯಲ್ಲಿ, "೨೦೧೭ರಲ್ಲಿ ಎನ್ಎಚ್ಯುಎಂ ವತಿಯಿಂದ ಆಶಾ ಕಾರ್ಯಕರ್ತೆಯರನ್ನು ನೇಮಕ ಮಾಡಿಕೊಂಡ ಕಾರಣಕ್ಕೆ ಆರೋಗ್ಯ ಸಂಪರ್ಕ ಕಾರ್ಯಕರ್ತೆಯರನ್ನು ಘನತ್ಯಾಜ್ಯ ನಿರ್ವಹಣಾ ವಿಭಾಗಕ್ಕೆ ವರ್ಗವಣೆ ಮಾಡಲಾಯಿತು. ಈಗ

ಬಿ.ಎಸ್.ಡಬ್ಲ್ಯೂ.ಎಂ.ಎನ್ ಕಡೆಯಿಂದ ವೇತನ ಪಾವತಿ ಎಂದು ತಿಳಿಸಿದ್ದಾರೆ. ಕಳೆದ ೩೦ ವರ್ಷಗಳಿಂದ ಪಾಲಿಕೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳೆಯರಿಗೆ ಬಿಬಿಎಂಪಿಯಿಂದಲೇ ವೇತನ ಪಾವತಿ ವ್ಯವಸ್ಥೆ ಮಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

><><><><><

ಮಂಡ್ಯದಲ್ಲಿ ಕೃಷಿ ಕೂಲಿ ಕಾರ್ಮಿಕರ ಸಮಸ್ಯೆಗಳನ್ನು ನಿಯಮಾನುಸಾರ ಪರಿಹರಿಸಬಹುದಾದ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಿ ವರದಿ ನೀಡುವಂತೆ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಸಭೆ ನಡೆಸಿ ಮಾತನಾಡಿದ ಅವರು ಗ್ರಾಮಗಳಲ್ಲಿ ಹಕ್ಕು ಪತ್ರ, ನಿವೇಶನ ಕುರಿತು ಸಮಸ್ಯೆಗಳಿದ್ದಲ್ಲಿ ತಹಶೀಲ್ದಾರ್, ತಾಲ್ಲೂಕು ಪಂಚಾಯತ್ ಹಾಗೂ ಶಾಸಕರ ಅಧ್ಯಕ್ಷತೆಯಲ್ಲಿ ಸಭೆ ನಡೆಸಬೇಕು. ಸಮಸ್ಯೆ ಪರಿಹಾರವಾಗದಿದ್ದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತನ್ನಿ ಎಂದು ತಿಳಿಸಿದ್ದಾರೆ. ನರೇಗಾ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ಆದ್ಯತೆ ನೀಡಬೇಕು. ಗುತ್ತಿಗೆದಾರರಿಗೆ ಕಾಮಗಾರಿ ರೂಪದಲ್ಲಿ ನೀಡುವುದನ್ನು ನಿಲ್ಲಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿ ಡಾ. ಕುಮಾರ ಮಾತನಾಡಿ, ಮಂಡ್ಯ ನಗರ ವ್ಯಾಪ್ತಿಯಲ್ಲಿ ಸುಮಾರು ೧೦೦೦ ಕ್ಕೂ ಹೆಚ್ಚು ಜನ ನಿವೇಶನ ರಹಿತ ಬಡವರಿದ್ದು ಅವರಿಗೆ ನಿವೇಶನ ಒದಗಿಸಲು ೩೫ ಎಕರೆ ಭೂಮಿ ಬೇಕಾಗಿದೆ. ವಿಶೇಷ ಪ್ರಕರಣ ಎಂದು ಪರಿಗಣಿಸಿ ನಿವೇಶನ ಒದಗಿಸಲು ಸಮಸ್ಯೆ ಪರಿಹರಿಸಿಕೊಡುವಂತೆ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><><

ಬೆಂಗಳೂರಿನ ಜನನಿಬಿಡ ಕೆ.ಆರ್. ಮಾರುಕಟ್ಟೆಯ ಬಳಿ ಇರುವ ನಗರತ್‌ಪೇಟೆಯಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದ ಅಗ್ನಿ ಅನಾಹುತದಲ್ಲಿ ಒಂದೇ ಕುಟುಂಬದ ನಾಲ್ವರು ಸೇರಿ ಐವರು ಸಜೀವ ದಹನವಾಗಿದ್ದಾರೆ. ಸಾವನ್ನಪ್ಪಿದವರು ನಾಲ್ಕನೇ ಮಹಡಿಯಲ್ಲಿರುವ ಮನೆಯಲ್ಲಿ ವಾಸಿಸುತ್ತಿದ್ದರು. ಬೆಂಕಿ ಮೊದಲು ಪ್ಲಾಸ್ಟಿಕ್ ಮ್ಯಾಟ್ ಅಂಗಡಿಯಲ್ಲಿ ಕಾಣಿಸಿಕೊಂಡು ನಂತರ ಇಡೀ ಮಹಡಿಗೆ ವ್ಯಾಪಿಸಿದೆ. ಸುಮಾರು ೧೮ ಅಗ್ನಿಶಾಮಕ ದಳಗಳು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿವೆ.

><><><><><

ರೇಣುಕಾ ಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್ ಹಾಗೂ ಇತರ ಆರೋಪಿಗಳ ವಿರುದ್ಧ ತ್ವರಿತ ವಿಚಾರಣೆ ಖಚಿತಪಡಿಸಿಕೊಳ್ಳಲು ತ್ವರಿತ ನ್ಯಾಯಾಲಯ ರಚನೆಗೆ ಅರ್ಜಿ ಸಲ್ಲಿಸಲು ರಾಜ್ಯ ಪೊಲೀಸರು ಚಿಂತನೆ ನಡೆಸುತ್ತಿದ್ದಾರೆ ಎಂದು ಐಎಎನ್ ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ವಿಚಾರಣೆಯನ್ನು ಪೂರ್ಣಗೊಳಿಸಿ ಪ್ರಕರಣವನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಸುಪ್ರೀಂ

ಕೋರ್ಟ್ ನಿರ್ದೇಶನದ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಪೊಲೀಸ್ ಇಲಾಖೆ ಈಗಾಗಲೇ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದ್ದು, ಸರ್ಕಾರದ ಅನುಮತಿ ಸಿಕ್ಕರೆ ಶೀಘ್ರವೇ ಅರ್ಜಿ ಸಲ್ಲಿಸಲಿದೆ. ಮೂಲಗಳ ಪ್ರಕಾರ, ದರ್ಶನ್ ಮತ್ತು ಇತರ ಆರೋಪಿಗಳ ವಿರುದ್ಧದ ವಿಚಾರಣೆಯನ್ನು ಆರು ತಿಂಗಳೊಳಗೆ ಪೂರ್ಣಗೊಳಿಸಲು ಮತ್ತು ಪ್ರಕರಣದಲ್ಲಿ ಶಿಕ್ಷೆ ವಿಧಿಸಿದ ನಂತರ ಸುಪ್ರೀಂ ಕೋರ್ಟ್‌ಗೆ ವರದಿ ಸಲ್ಲಿಸಲು ಪೊಲೀಸರು ತೀರ್ಮಾನಿಸಿದ್ದಾರೆ.

><><><><><

ಹಣಕಾಸು ಸೇರ್ಪಡೆ ಉಪಕ್ರಮಕ್ಕೆ ಪೂರಕವಾಗಿ ಪ್ರಮುಖ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನವನ್ನು ರೂಪಿಸಲಾಗುತ್ತಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್‌ನ ಪ್ರಾದೇಶಿಕ ನಿರ್ದೇಶಕರಾದ ಸೋನಾಲಿ ಸೇನ್ ಗುಪ್ತಾ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಕೊಡಿಗೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆನರಾ ಬ್ಯಾಂಕ್ ಹಾಗೂ ಕೇಂದ್ರ ಹಣಕಾಸು ಸೇವೆಗಳ ಇಲಾಖೆ ಸಹಯೋಗದಲ್ಲಿ ನಡೆದ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು , ಹಣಕಾಸು ನಿರ್ವಹಣೆ ಬಗ್ಗೆ ಗ್ರಾಮೀಣ ಜನರಿಗೆ ಅರಿವು ಮೂಡಬೇಕು. ಸೈಬರ್ ವಂಚನೆಗಳಿಗೆ ಒಳಗಾಗಂದತೆ ಎಚ್ಚರ ವಹಿಸಬೇಕು ಎಂದು ಕರೆ ನೀಡಿದ್ದಾರೆ. ಕೆನರಾ ಬ್ಯಾಂಕ್ ಬೆಂಗಳೂರು ಗ್ರಾಮಾಂತರ ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಮಾಂಜಿ ಪ್ರಧಾನ ಮಂತ್ರಿ ಸಾಮಾಜಿಕ ಭದ್ರತಾ ಯೋಜನೆಗಳ ಬಗ್ಗೆ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ರಾಮಾಜಿ, ಬ್ಯಾಂಕ್ ವ್ಯವಸ್ಥಾಪಕ

><><><><><

ಮಂಗಳೂರು ನಗರ ಪೊಲೀಸ್ ಠಾಣಾ ವ್ಯಾಪ್ತಿಯ ವಾಮಂಜೂರು ಮತ್ತು ಕಂಕನಾಡಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ಪ್ರದೇಶವನ್ನು ಮರು ವಿಂಗಡಿಸಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ತಿಳಿಸಿದ್ದಾರೆ. ವಾಮಂಜೂರು ಪೊಲೀಸ್ ಠಾಣಾ ವ್ಯಾಪ್ತಿಗೆ ಒಳಪಡುವ ಅಡ್ಯಾರು ಮತ್ತು ಅರ್ಕುಳ ಗ್ರಾಮಗಳನ್ನು ಕಂಕನಾಡಿ ನಗರ ಪೊಲೀಸ್ ಠಾಣಾ ವ್ಯಾಪ್ತಿಗೆ ಹಾಗೂ ಕಂಕನಾಡಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ಪದವು ಗ್ರಾಮವನ್ನು ವಾಮಂಜೂರು ಅಂದರೆ ಮಂಗಳೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿಸಲಾಗಿದೆ ಎಂದು ಆಯುಕ್ತರು ಹೇಳಿದ್ದಾರೆ. ಕಂಕನಾಡಿ ನಗರ ಪೊಲೀಸ್ ಠಾಣಾ ವ್ಯಾಪ್ತಿಗೆ ಸಂಬಂಧಿಸಿದಂತೆ ಪದವು ಗ್ರಾಮಕ್ಕೆ ಒಳಪಡುವ ಕುಲಶೇಖರ, ಸಿಲ್ವರ್ ಗೇಟ್, ಡೈರಿ ಗೇಟ್, ಕುಲಶೇಖರ ಚೌಕಿ, ಪದವಿನಂಗಡಿ ಮುಂತಾದ ಪ್ರದೇಶಗಳು ವಾಮಂಜೂರು ಪೊಲೀಸ್ ಠಾಣಾ ವ್ಯಾಪ್ತಿಗೆ ಒಳಪಡಿಸಲಾಗಿದೆ. ಅದೇ ರೀತಿ ವಾಮಂಜೂರು ಪೊಲೀಸ್ ಠಾಣಾ

ವ್ಯಾಪ್ತಿಗೆ ಒಳಪಡುವ ಅಡ್ಯಾರು ಮತ್ತು ಅರ್ಕುಳ ಗ್ರಾಮಕ್ಕೆ ಒಳಪಡುವ ಸ್ಥಳಗಳಾದ ಅಡ್ಯಾರ್ ಪದವು. ವಳಚ್ಚಿಲ್, ಸೋಮನಾಥ ಕಟ್ಟೆ, ಅಡ್ಯಾರ್ ಕಟ್ಟೆ, ಅರ್ಕುಳ, ಶ್ರೀನಿವಾಸ ಕಾಲೇಜು, ಸಹ್ಯಾದ್ರಿ ಕಾಲೇಜ್, ಪ್ರದೇಶಗಳನ್ನು ಕಂಕನಾಡಿ ನಗರ ಪೊಲೀಸ್ ಠಾಣಾ ವ್ಯಾಪ್ತಿಗೆ ಮರುವಿಂಗಡಿಸಿ ಸರಕಾರ ಅಧಿಸೂಚನೆ ಹೊರಡಿಸಿದೆ ಎಂದು ಹೇಳಿದ್ದಾರೆ.

><><><><><

ಮಳೆಗಾಲದಲ್ಲಿ ವಿದ್ಯುತ್ ವ್ಯತ್ಯಯ ನಿವಾರಿಸುವ ನಿಟ್ಟಿನಲ್ಲಿ ಮಡಿಕೇರಿ ನಗರದಾದ್ಯಂತ ನೆಲದಾಳದ ವಿದ್ಯುತ್ ಕೇಬಲ್ ಅಳವಡಿಕೆಗೆ ಚಿಂತನೆ ಹರಿಸಲಾಗಿದೆ ಎಂದು ಶಾಸಕ ಡಾ.ಮಂಥರ್ ಗೌಡ ಹೇಳಿದ್ದಾರೆ. ಕೊಡಗಿನಲ್ಲಿ ಮಾತನಾಡಿದ ಅವರು ಈ ಕುರಿತಂತೆ ಇಂಧನ ಸಚಿವರಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ. ಮಡಿಕೇರಿಯಲ್ಲಿ ವರ್ಷದಲ್ಲಿ ೫ ರಿಂದ ೬ ತಿಂಗಳು ಮಳೆ ಬೀಳುವ ಹಿನ್ನಲೆಯಲ್ಲಿ ಮೂಲಸೌಲಭ್ಯಕ್ಕೆ ಸಾಕಷ್ಟು ಸಮಸ್ಯೆ ಎದುರಾಗುತ್ತಿದೆ ಎಂದು ತಿಳಿಸಿದ್ದಾರೆ. ಸ್ಟೋನ್ ಹಿಲ್ ನಲ್ಲಿ ೫ ಕೋಟಿ ರೂಪಾಯಿ ವೆಚ್ಚದ ತ್ಯಾಜ್ಯ ವಿಲೇವಾರಿ ಘಟಕವು ಮಳೆಗಾಲದ ನಂತರ ಬಳಕೆಗೆ ಲಭಿಸಲಿದೆ ಎಂದು ಮಾಹಿತಿ ನೀಡಿದ್ದಾರೆ.

><><><><><

ರಾಜ್ಯದ ನೈಋತ್ಯ ಒಳನಾಡಿನಲ್ಲಿ ಸಕ್ರಿಯವಾಗಿದ್ದು ಕರಾವಳಿಯಲ್ಲಿ ಸಾಮಾನ್ಯವಾಗಿತ್ತು. ಇಂದಿನಿಂದ ಇದೇ ೨೦ ರ ವರೆಗೆ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ರಾಜ್ಯದ ಉತ್ತರ ಹಾಗೂ ದಕ್ಷಿಣ ಒಳನಾಡು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಿಗೆ ರೆಡ್ ಮತ್ತು ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ನಾಳೆ ಉತ್ತರ ಕನ್ನಡ, ಉಡುಪಿ, ಚಿಕ್ಕಮಗಳೂರು ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಈ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಮತ್ತು ಘಾಟ್ ಪ್ರದೇಶಗಳಲ್ಲಿ ಭೂಕುಸಿತ ಸಂಭವಿಸುವ ಸಾಧ್ಯತೆ ಇದೆ. ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿದ್ದು ಸಾಧಾರಣ ಮಳೆಯಾಗಲಿದೆ.

><><><><><